## ಕರ್ನಾಟಕ ಸರ್ಕಾರದ ನಡವಳಿಗಳು.

ವಿಷಯ:- ಚಿಕ್ಕಮಗಳೂರು ಜಿಲ್ಲೆ, ತರಿಕೆರೆ ತಾಲ್ಲೂಕು ಪಂಚಾಯತಿಯಲ್ಲಿ 2013-14ನೇ ಸಾಲಿನ ವಿವಿಧ ಅನುದಾನದಡಿ ಕಾಮಗಾರಿ ನಿರ್ವಹಿಸದೇ ಹಣದುರಪಯೋಗ ಪ್ರಕರಣದಲ್ಲಿ ನಡೆದಿರುವ ಅವ್ಯವಹಾರದಲ್ಲಿ ಭಾಗಿಯಾಗಿರುವ ಅಧಿಕಾರಿಗಳ ವಿರುದ್ಧದ ಜಂಟಿ ಇಲಾಖಾ ವಿಚಾರಣೆ ನಡೆಸಲು ವಿಚಾರಣಾಧಿಕಾರಿ ಮತ್ತು ಮಂಡನಾಧಿಕಾರಿಯನ್ನು ನೇಮಕ ಮಾಡುವ ಬಗ್ಗೆ ಆದೇಶ.

ಓದಲಾಗಿದೆ:(1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿಕ್ಕಮಗಳೂರು ಇವರ ಪತ್ರ ಸಂಖ್ಯೆ: ಜಿಪಂಚಿ/ಆ 1/ಸಿಸಿಎ /ಸಿಆರ್-07/2014-15 ದಿನಾಂಕ:23-11-2015.

(2) ಸರ್ಕಾರದ ಕಾರಣ ಕೇಳುವ ನೋಟೀಸ್ ಸಂಖ್ಯೆ:ಗ್ರಾಅಪ 307 ವಿಸೇಬಿ 2015 ದಿನಾಂಕ: 18-01-2016.

(3).ಅಪಾದಿತರ ಲಿಖಿತ ಹೇಳಿಕೆಗಳು.

------

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಸಂಖ್ಯೆ:(1)ರ 23-11-2015ರ ಪತ್ರದಲ್ಲಿ, ಚಿಕ್ಕಮಗಳೂರು ಜಿಲ್ಲೆ, ತರಿಕೇರೆ ತಾಲ್ಲೂಕು ಪಂಚಾಯತಿಯಲ್ಲಿ 2013-14ನೇ ಸಾಲಿನ ಅನಿರ್ಬಂಧಿತ ಅನುದಾನದ ಕ್ರಿಯಾಯೋಜನೆಯಲ್ಲಿ ರೂ. 3.00 ಲಕ್ಷಗಳ ಕಾಮುಗಾರಿಗಳಲ್ಲಿ ರ್‍ಯಾಂಪ್‌ಗಳ ಕಾಮಗಾರಿ ನಿರ್ವಹಿಸದೆ ರೂ. 2,97,320/- ಗಳ ಬಿಲ್ ಪಾವತಿಸಿರುವುದು ಮತ್ತು 2013-14ನೇ ಸಾಲಿನ ವಿಶೇಷ ಅಭಿವೃದ್ಧಿ ಅನುದಾನದ ರೂ. 0.80 ಲಕ್ಷಗಳ ಕಾಮಗಾರಿಯಲ್ಲಿ ರ್‍ಯಾಂಪ್‌ಗಳ ಕಾಮಗಾರಿ ನಿರ್ವಹಿಸದೆ ರೂ. 74,330/- ಗಳ ಬಿಲ್ ಪಾವತಿಗೆ ಕಾರಣರಾಗಿ ಒಟ್ಟಾರೆಯಾಗಿ ರೂ. 3,71,650/- ಗಳ ಹಣ ದುರುಪಯೋಗಕ್ಕೆ ಕಾರಣರಾಗಿರುವ ಈ ಕೆಳಕಂಡ ಅಧಿಕಾರಿಗಳ ವಿರುದ್ಧ ಶಿಸ್ತುಕ್ರಮ ಜರುಗಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು ರವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

1. ಶ್ರೀ. ದೇವರಾಜಪ್ಪ ಸಿ. ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ತರಿಕೇರೆ.
2. ಶ್ರೀ. ಕೆ. ಡಿ. ಶಂಕರನಾಯಕ್, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜನಿಯರ್, ಪಂಚಾಯತ್ ರಾಜ್ ಇಂಜನಿಯರಿಂಗ್ ಉಪ ವಿಭಾಗ, ತರಿಕೇರೆ.
3. ಶ್ರೀ. ವಿ. ಹರೀಶಕುಮಾರ, ಹಿಂದಿನ ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜನಿಯರಿಂಗ್ ಉಪ ವಿಭಾಗ, ತರಿಕೇರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ, ಪ್ರಕರಣದಲ್ಲಿ ಒಟ್ಟಾರೆ ರೂ. 3,71,650/- ಗಳ ಹಣ ದುರುಪಯೋಗದ ಅವ್ಯವಹಾರಗಳು ನಡೆದಿರುವುದು ಮೇಲ್ನೋಟಕ್ಕೆ ಕಂಡುಬಂದಿರುವುದರಿಂದ ಮೇಲ್ಕಂಡ ಅಧಿಕಾರಿ/ನೌಕರರಿಗೆ ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಗಳು 1957ರ ನಿಯಮ 11ರಡಿಯಲ್ಲಿ ಕಾರಣ ಕೇಳುವ ನೋಟಿಸಿನೊಂದಿಗೆ ದೋಷಾರೋಪಣ ಪಟ್ಟಿಯನ್ನು ಮೇಲೆ ಓದಲಾದ ಕ್ರಮಸಂಖ್ಯೆ:(2)ರ ದಿನಾಂಕ: 18-01-2016, ರಂದು ಜಾರಿ ಮಾಡಲಾಗಿತ್ತು.

ಸದರಿ ನೋಟೀಸ್‌ಗೆ ಶ್ರೀ. ದೇವರಾಜಪ್ಪ ಸಿ. ಇವರು ದಿನಾಂಕ: 15-03-2016 ರಲ್ಲಿ ಲಿಖಿತ ಹೇಳಿಕೆಗಳನ್ನು ಸಲ್ಲಿಸಿ, ತಮ್ಮ ವಿರುದ್ಧ ವಿಚಾರಣೆ ನಡೆಸಲು ನಿಯಮಗಳಲ್ಲಿ ಅವಕಾಶವಿಲ್ಲದಿರುವುದರಿಂದ ಪ್ರಸ್ತಾಪಿತ ವಿಚಾರಣೆ ಕೈಬಿಟ್ಟು ಆರೋಪದಿಂದ ದೋಷಮುಕ್ತಗೊಳಿಸಿ ಆದೇಶ ಹೊರಡಿಸಲು ಕೋರಿರುತ್ತಾರೆ. ಮತ್ತು ಶ್ರೀ. ವಿ. ಹರೀಶಕುಮಾರ್, ಸಹಾಯಕ ಇಂಜಿನಿಯರ್, ಇವರು ದಿನಾಂಕ: 14-06-2016ರ ಪತ್ರದಲ್ಲಿ ಲಿಖಿತ ಹೇಳಿಕೆಗಳನ್ನು ಸಲ್ಲಿಸಿ, ಪ್ರಕರಣದಲ್ಲಿ ಅಂಗವಿಕಲ ಹಣ ದುರುಪಯೋಗ ಮಾಡುವ ಉದ್ದೇಶವಿರುವುದಿಲ್ಲವೆಂದು ತಿಳಿಸಿರುತ್ತಾರೆ. ಶ್ರೀ. ಕೆ.ಡಿ. ಶಂಕರನಾಯಕ್, ಸಹಾಯಕ ಕಾರ್ಯಪಾಲಕ ಇಂಜಿನೀಯರ್, ಪಂಚಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ತರೀಕೆರೆ ಇವರಿಗೆ ನೋಟೀಸ್ಸನ್ನು ಜಾರಿ ಮಾಡಿದ ಮೂಲ ಸ್ವೀಕೃತಿಯನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿಕ್ಕಮಗಳೂರು ರವರು ದಿನಾಂಕ: 25-05-2016ರ ಪತ್ರದೊಂದಿಗೆ ಕಳುಹಿಸಿರುತ್ತಾರೆ. ಆಪಾದಿತರ ಲಿಖಿತ ಹೇಳಿಕೆಗಳನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿದ್ದು, ಪ್ರಕ್ರಣದಲ್ಲಿ ಒಟ್ಟಾರೆ ರೂ. 3,71,650/-ಗಳ ಹಣ ದುರುಪಯೋಗದ ಗಂಬೀರ ಸ್ವರೂಪದ ಅವ್ಯವಹಾರದ ಆರೋಪಗಳಿರುವುದರಿಂದ ಆಪಾದಿತರ ವಿರುದ್ಧದ ಮಾಡಲಾದ ಆರೋಪಗಳ ಸತ್ಯಾಸತ್ಯತೆಯನ್ನು ತಿಳಿಯುವ ಸಲುವಾಗಿ ಜಂಟಿ ಇಲಾಖಾ ವಿಚಾರಣೆಯನ್ನು ನಡೆಸಲು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 307 ವಿಸೇಬಿ 2015 ಬೆಂಗಳೂರು ದಿನಾಂಕ:-14-07-2016.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ ಸರ್ಕಾರವು ಈ ಕೆಳಕಂಡ ಅಧಿಕಾರಿಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11 ರ ಅನುಸಾರ ಮತ್ತು ಸದರಿ ನಿಯಮಗಳ ನಿಯಮ 13 ರಡಿಯಲ್ಲಿ ಜಂಟಿ ಇಲಾಖಾ ವಿಚಾರಣೆ ನಡೆಸಲು ಆದೇಶಿಸಿದೆ.

ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11 ರ ಪ್ರಕಾರ ಇಲಾಖಾ ವಿಚಾರಣೆಯನ್ನು ನಡೆಸಲು, ಅದೇ ನಿಯಮಾವಳಿಗಳ ನಿಯಮ 11(2) ರ ಪ್ರಕಾರ ಶ್ರೀ ಎ. ಕೃಷ್ಣಪ್ಪ, ನಿವೃತ್ತ ಜಿಲ್ಲಾ ಮತ್ತು ಸತ್ರನ್ಯಾಯಾಧೀಶರು, ಬೆಂಗಳೂರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಿದೆ.

ಶಿಸ್ತು ಪ್ರಾಧಿಕಾರಿಯ ಪರವಾಗಿ ಪ್ರಕರಣವನ್ನು ವಿಚಾರಣಾಧಿಕಾರಿಯವರ ಮುಂದೆ ಮಂಡಿಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11(5)(ಸಿ) ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಸಹಾಯಕ ಕಾರ್ಯದರ್ಶಿ ಜಿಲ್ಲಾ ಪಂಚಾಯತಿ ಚಿಕ್ಕಮಗಳೂರು ಇವರನ್ನು ಮಂಡನಾಧಿಕಾರಿಯಾಗಿ ನೇಮಿಸಿದೆ.

ವಿಚಾರಣಾಧಿಕಾರಿಯವರು ಕರ್ನಾಟಕ ನಾಗರೀಕ ಸೇವಾ (ವರ್ಗಿಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11 ರಲ್ಲಿ ನಿಗದಿ ಪಡಿಸಿರುವ ಕಾರ್ಯವಿಧಾನದ ಪ್ರಕಾರ ಇಲಾಖಾ ವಿಚಾರಣೆ ಜರುಗಿಸಿ ಪ್ರತಿಯೊಬ್ಬ ಆಪಾದಿತ ಅಧಿಕಾರಿ ವಿರುದ್ಧದ ಪ್ರತಿಯೊಂದು ಆರೋಪಗಳು ಸಾಬೀತಾಗಿರುವ/ಸಾಬೀತಾಗಿಲ್ಲದಿರುವ ಬಗ್ಗೆ ಸ್ಪಷ್ಟ ಅಭಿಪ್ರಾಯದೊಂದಿಗೆ ವಿಚಾರಣಾ ವರದಿಯನ್ನು 3 ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ವಿಚಾರಣಾಧಿಕಾರಿಗಳಿಗೆ ಸೂಕ್ತ ಸ್ಥಳಾವಕಾಶ, ಶೀಘ್ರಲಿಪಿಗಾರರ ಸೇವೆ ಹಾಗೂ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು(ಗ್ರಾ) ಇವರು ಕ್ರಮ ಕೈಗೊಳ್ಳತಕ್ಕದ್ದು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ/42/ ಸೇಇವಿ/2014, ದಿನಾಂಕ:08-01-2015 ರನ್ವಯ ವಾಹನ ಭತ್ಯೆಯೂ ಸೇರಿದಂತೆ ರೂ.20,000/- ಗಳ ಸಂಭಾವನೆಯನ್ನು ಪಡೆಯಲು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

14/7/2016

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇ. ಜಿ&ಇ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1. ಪ್ರಧಾನ ಮಹಾಲೇಖಪಾಲರು(ಎ&ಇ)ರವರ ಕಾರ್ಯದರ್ಶಿ, ಕರ್ನಾಟಕ ಹೊಸಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂ-5329, ಬೆಂಗಳೂರು-560001.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿಕ್ಕಮಗಳೂರು /ಬೆಂಗಳೂರು ಗ್ರಾಮಾಂತರ.
3. ಶ್ರೀ ಎ. ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಮತ್ತು ವಿಚಾರಣಾಧಿಕಾರಿಗಳು, ಮನೆ ನಂ. 1242, 4ನೇ ಮುಖ್ಯ ರಸ್ತೆ, 8ನೇ ಕ್ರಾಸ್, ಚಂದ್ರಾಲೇಔಟ್, ಬೆಂಗಳೂರು-40.
4. ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತಿ, ಚಿಕ್ಕಮಗಳೂರು (ಮಂಡನಾಧಿಕಾರಿ).
5. ಆಪಾದಿತ ಅಧಿಕಾರಿಗಳಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿಕ್ಕಮಗಳೂರು ಇವರ ಮುಖಾಂತರ)

<u>ಪ್ರತಿಯನ್ನು:-</u>

1. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ(ಪಂ.ರಾಜ್)/ಜಂಟಿ ಕಾರ್ಯದರ್ಶಿ (ಆಡಳಿತ), ಗ್ರಾ.ಅ. & ಪಂ.ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
2. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
3. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.